ಮೇಲೆ ಹೇಳಲಾದ ಸಂದರ್ಭಗಳ ಹಿನ್ನೆಲೆಯಲ್ಲಿ, ಕರ್ನಾಟಕ ರಾಜ್ಯವು ಸರ್ಕಾರಿ ಸೇವೆಗಳಲ್ಲಿ ಮತ್ತು ಶೈಕ್ಷಣಿಕ ಸಂಸ್ಥೆಗಳ ಪ್ರವೇಶಾವಕಾಶದಲ್ಲಿ ಶೇಕಡ 73ರಷ್ಟು ಮೀಸಲಾತಿ ನೀತಿಯನ್ನು ಮುಂದುವರಿಸುವುದರಿಂದ ಮಾತ್ರ ಕರ್ನಾಟಕ ರಾಜ್ಯದಲ್ಲಿ ಹಿಂದುಳಿದ ವರ್ಗಗಳ ಜನರ ನಿರಂತರ ಪ್ರಗತಿಯನ್ನು ಖಚಿತ ಪಡಿಸಿಕೊಳ್ಳುವುದು ಮತ್ತು ಬದಲಾಗುತ್ತಿರುವ ಸಾಮಾಜಿಕ ಪರಿಸ್ಥಿತಿಗಳಿಗೆ ಅವಕಾಶ ಕಲ್ಪಿಸುವುದು ಸಾಧ್ಯವಾಗುವುದರಿಂದ ಕರ್ನಾಟಕ ರಾಜ್ಯವು ಶೇಕಡ 73ರಷ್ಟು ಮೀಸಲಾತಿಯನ್ನು ಮುಂದುವರಿಸುವುದು ಸಾಧ್ಯವಾಗುವಂತೆ ಭಾರತ ಸಂವಿಧಾನಕ್ಕೆ ತುರ್ತಾಗಿ ಸೂಕ್ತ ತಿದ್ದುಪಡಿಗಳನ್ನು ತರಲು ತಕ್ಷಣ ಕ್ರಮ ಕೈಗೊಳ್ಳಬೇಕೆಂದು ಕರ್ನಾಟಕ ವಿಧಾನಸಭೆಯು ಕೇಂದ್ರ ಸರ್ಕಾರವನ್ನು ಕೋರುತ್ತದೆ.

ಆದ್ದರಿಂದ, ಕರ್ನಾಟಕ ವಿಧಾನ ಸಭೆಯು ಮೇಲಿನ ನಿರ್ಣಯವನ್ನು ಭಾರತ ಸರ್ಕಾರಕ್ಕೆ ಶಿಫಾರಸು ಮಾಡಲು ನಿರ್ಣಯಿಸಿದೆ.

ಸಭಾಧ್ಯಕ್ಷರು:– ರಾಜ್ಯದ ಮೀಸಲಾತಿ ನೀತಿಯನ್ನು ಭಾರತ ಸಂವಿಧಾನದ 9ನೇ ಅನುಸೂಚಿಯಲ್ಲಿ ಸೇರಿಸುವ ಬಗ್ಗೆ ಮಂಡಿಸಿದ ನಿರ್ಣಯವನ್ನು ಮತಕ್ಕೆ ಹಾಕುತ್ತೇನೆ. ನಿರ್ಣಯವು ಸರ್ವಾನುಮತದಿಂದ ಅಂಗೀಕಾರವಾಯಿತು.

ಅಧ್ಯಕ್ಷರು:– ಇಂದು ಬೆಳಿಗ್ಗೆ ಮಾನ್ಯ ಸದಸ್ಯರಾದ ದಯಾನಂದ ರಾವ್ ಅವರು ಪತ್ರಿಕೆಯಲ್ಲಿ ಬಂದಿದ್ದರ ಬಗ್ಗೆ ಹೇಳಿದರು. ನಾನು ಕಡತ ತರಿಸಿ ನೋಡಿದಾಗ ಆ ರೀತಿ ಏನೂ ಇಲ್ಲ. ತಮ್ಮ ಬಗ್ಗೆ ಪ್ರಸ್ತಾವನೆ ಇಲ್ಲ. ಅದನ್ನು ಹೇಳಿ ಪತ್ರಿಕೆಯವರು ತಪ್ಪು ಪ್ರತಿಬಿಂಬಿಸಿದ್ದಾರೆ ? ಅದನ್ನು ಅವರು ಸುಧಾರಿಸಿ ಬರೆಬೇಕೆಂದು ನಾನು ಪತ್ರಿಕೆಯವರನ್ನು ಕೇಳಿಕೊಳ್ಳುತ್ತೇನೆ.

ಪ್ರಕಟಣೆ

ಅಧ್ಯಕ್ಷರು:– ಮಾನ್ಯ ವಿಧಾನ ಪರಿಷತ್ತಿನ ಸಭಾಪತಿಯವರಿಂದ ಈ ಕೆಳಕಂಡ ಸಂದೇಶವು ಬಂದಿರುತ್ತದೆ:

''ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮ 114ರ ಮೇರೆಗೆ ದಿನಾಂಕ 19ನೇ ಸೆಪ್ಟೆಂಬರ್ 1994ರಂದು 'ಕೂಡಲ ಸಂಗಮ ಅಭಿವೃದ್ಧಿ ಮಂಡಲಿ ವಿಧೇಯಕ, 1994' ಯಾವುದೇ ತಿದ್ದುಪಡಿಯಿಲ್ಲದೆ ಅನುಮೋದಿಸಿತೆಂದು ತಿಳಿಸಿರುತ್ತಾರೆ.''

ಈಗ ಸಭೆಯ ಕಾರ್ಯಕಲಾಪವನ್ನು ಅನಿರ್ದಿಷ್ಟ ಕಾಲದವರೆಗೆ ಮುಂದೂಡಲಾಗಿದೆ.

ಸಭೆಯು ಮಧ್ಯಾಹ್ನ 3 ಗಂಟೆ 57 ನಿಮಿಷಕ್ಕೆ ಮುಕ್ತಾಯಗೊಂಡು ಅನಿರ್ದಿಷ್ಟ ಕಾಲದವರೆಗೆ ಮುಂದೂಡಲ್ಪಟ್ಟಿತು.

† ಈ ಚಿಹ್ನೆ ಮಾನ್ಯ ಸದಸ್ಯರ ಟಿಪ್ಪಣಿ ಅಥವಾ ಭಾಷಣವನ್ನು ಪರಿಷ್ಕರಿಸಿಲ್ಲ ಎಂದೂ ಸೂಚಿಸುತ್ತದೆ.